# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1011 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 14-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಿ.ಬಿ.ಎಂ.ಪಿ.ಯಲ್ಲಿ ಖಾಲಿ ನಿವೇಶನಗಳಿಗೆ ಖಾತೆ ಮಾಡಲು ಇರುವ ಮಾನದಂಡಗಳೇನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಭೂ-ಪರಿವರ್ತನೆಗೊಂಡು ವಿಭಜನೆಗೊಳ್ಳದ ಏಕ ನಿವೇಶನಗಳಿಗೆ ಮತ್ತು ಭೂ-ಪರಿವರ್ತನೆಗೊಂಡು ಸಕ್ಷಮ ಯೋಜನಾ ಪ್ರಾಧಿಕಾರದಿಂದ ಅನುಮೋದನೆ ಪಡೆದು ವಿಭಜನೆಗೊಳಗಾದ ನಿವೇಶನಗಳಿಗೆ ಸುಧಾರಣಾ ವೆಚ್ಚವನ್ನು ಪಾವತಿಸಿಕೊಂಡು ಖಾತೆ ನೊಂದಾಯಿಸಲಾಗುತ್ತಿರುತ್ತದೆ. |
| ಆ | ಸಕಾಲದಲ್ಲಿ ಅರ್ಜಿ ಸಲ್ಲಿಸಿದ ಎಷ್ಟು ದಿನಗಳಲ್ಲಿ ಖಾತೆ ಮಾಡಿಕೊಡಲಾಗುತ್ತಿದೆ; | ಅರ್ಜಿ ಸಲ್ಲಿಸಿದ ದಿನಾಂಕದಿಂದ 30 ಕೆಲಸದ ದಿನಗಳ ಒಳಗಾಗಿ ಅರ್ಜಿಯನ್ನು ಇತ್ಯರ್ಥಪಡಿಸಲು ಸಮಯವನ್ನು ನಿಗದಿಪಡಿಸಲಾಗಿರುತ್ತದೆ. |
| ಇ | ಇಲಾಖಾಧಿಕಾರಿಗಳು ಕೋರಿರುವ ಎಲ್ಲಾ ದಾಖಲೆಗಳನ್ನು ಒದಗಿಸಿದ್ದರೂ ಖಾತೆ ಮಾಡದೆ ಹಲವಾರು ಭಾರಿ ಕಛೇರಿಗೆ ಸಾರ್ವಜನಿಕರು ಬರುವಂತೆ ಮಾಡಲು ಕಾರಣಗಳೇನು; | ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br>ಖಾತಾ ಕೋರಿ ಸಲ್ಲಿಸುವ ಅರ್ಜಿಯೊಂದಿಗೆ ಎಲ್ಲಾ ದಾಖಲೆಗಳನ್ನು ಸಲ್ಲಿಸಿದ ನಂತರ ಅರ್ಜಿಯನ್ನು ವಿಲೇವಾರಿ ಮಾಡದೇ ಇದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರುಗಳನ್ನು ನೀಡಿದಲ್ಲಿ ಸಂಬಂಧಪಟ್ಟ ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ. |
| ಈ | ಬಿ.ಡಿ.ಎ. ನವರು ಬಡಾವಣೆ ರಚಿಸಿ ನಿವೇಶನ ಹಂಚಿಕೆ ಮಾಡಿ ಬಡಾವಣೆ ನಕ್ಷೆಯನ್ನು ಸ್ಪಷ್ಟವಾಗಿ ನೀಡಿ ನಿವೇಶನವನ್ನು ಗುರುತಿಸಿಕೊಟ್ಟರೂ ಖಾತೆ ಮಾಡಲು ವಿಳಂಬವಾಗುತ್ತಿರಲು ಕಾರಣವೇನು? (ಸಂಪೂರ್ಣ ವಿವರ ನೀಡುವುದು) | ವಿಳಂಬ ಪ್ರಕರಣಗಳು ವರದಿಯಾಗಿರುವುದಿಲ್ಲ. |

**ಸಂಖ್ಯೆ: ನಅಇ 277 ಬಿಬಿಎಸ್ 2023(ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ.